# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 771 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.09.2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ಯಾವುವು: (ಸಂಪೂರ್ಣ ವಿವರಗಳನ್ನು ನೀಡುವುದು)</td><td>ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.</td></tr>
<tr><td>ಆ</td><td>ರಾಜ್ಯದಲ್ಲಿ ಪ್ರಸ್ತುತ ಇರುವ ಹಿರಿಯ ನಾಗರಿಕರ ಸಂಖ್ಯೆ ಎಷ್ಟು :</td><td>2011ರ ಜನಗಣತಿಯ ಪ್ರಕಾರ ಕರ್ನಾಟಕ ರಾಜ್ಯದಲ್ಲಿ ಒಟ್ಟು 57,91,032 ಹಿರಿಯ ನಾಗರಿಕರು ಇರುತ್ತಾರೆ.</td></tr>
<tr><td>ಇ</td><td>ಪ್ರಸ್ತುತ ಆರ್ಥಿಕ ವರ್ಷದಲ್ಲಿ ಎಷ್ಟು ಜನ ಹಿರಿಯ ನಾಗರಿಕರು ಸದರಿ ಸೌಲಭ್ಯಗಳನ್ನು ಪಡೆದಿದ್ದಾರೆ:</td><td>ಪ್ರಸ್ತುತ ಆರ್ಥಿಕ ವರ್ಷದಲ್ಲಿ ಇಲಾಖಾ ಯೋಜನೆಗಳ ಸೌಲಭ್ಯವನ್ನು ಪಡೆದಿರುವ ಹಿರಿಯ ನಾಗರಿಕರ ಮಾಹಿತಿ ಈ ಕೆಳಕಂಡಂತಿದೆ<br><table>
<tr><th>ಕ್ರ.ಸಂ</th><th>ಇಲಾಖಾ ಯೋಜನೆಗಳು</th><th>ಪ್ರಸ್ತುತ ಆರ್ಥಿಕ ವರ್ಷದಲ್ಲಿ ಸೌಲಭ್ಯ ಪಡೆದಿರುವ ಹಿರಿಯ ನಾಗರಿಕರ ಸಂಖ್ಯೆ:</th></tr>
<tr><td>1</td><td>ರಾಜ್ಯ ಅನುದಾನಿತ ವೃದ್ಧಾಶ್ರಮಗಳು</td><td>875</td></tr>
<tr><td>2</td><td>ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳು</td><td>1300</td></tr>
<tr><td>3</td><td>ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು (ಸೇವಾ ಸಿಂಧುರಡಿ)</td><td>16061</td></tr>
</table></td></tr>
<tr><td>ಈ</td><td>ರಾಜ್ಯದಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು?(ವಿವರ ನೀಡುವುದು)</td><td>ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖೆಯು ಅನುಷ್ಠಾನಗೊಳಿಸುವ ಯೋಜನೆಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.</td></tr>
</table>

ಮಮಇ 212 ಪಿಹೆಚ್‌ಪಿ 2022

Halappa

(ಆಚಾರ ಹಾಲಪ್ಪ ಬಸಪ್ಪ)
ಮಾನ್ಯ ಗಣಿ ಮತ್ತು ಭೂ ವಿಜ್ಞಾನ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು

# ಅನುಬಂಧ

## ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ

### ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯ್ದೆ–2007

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ–2007 ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ–2007ಅನ್ನು ದಿನಾಂಕ:01.04.2008ರಿಂದ ಕರ್ನಾಟಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಕಾಯ್ದೆಯಡಿ ದೌರ್ಜನ್ಯ, ಶೋಷಣೆ, ಮೋಸ, ವಂಚನೆಗೆ ಒಳಪಟ್ಟ ಹಿರಿಯ ನಾಗರಿಕರು ಕಾಯ್ದೆಯ ಪರಿಚ್ಛೇದ 7ರ ಉಪನಿಯಮ (1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಪ್ರತಿ ಕಂದಾಯ ಉಪವಿಭಾಗದಲ್ಲಿ ಆಯಾ ಉಪವಿಭಾಗದ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ನಿರ್ವಹಣಾ ನ್ಯಾಯಮಂಡಳಿಯಲ್ಲಿ ಪ್ರಕರಣವನ್ನು ದಾಖಲಿಸಿ ಗರಿಷ್ಠ 90 ದಿನಗಳ ಒಳಗಾಗಿ ನ್ಯಾಯ ಪಡೆಯಬಹುದಾಗಿರುತ್ತದೆ.

ನಿರ್ವಹಣಾ ನ್ಯಾಯ ಮಂಡಳಿಯು ತಿಂಗಳಿಗೆ ಗರಿಷ್ಠ ರೂ.10,000/–ಗಳ ಮಾಸಿಕ ನಿರ್ವಹಣಾ ಭತ್ಯೆಯಾಗಿ ನೀಡುವಂತೆ ಆದೇಶಿಸಬಹುದಾಗಿದೆ, ತಪ್ಪಿದಲ್ಲಿ 3 ತಿಂಗಳು ಜೈಲು ವಾಸ ಅಥವಾ ರೂ.5000/–ಗಳ ದಂಡ ಅಥವಾ ಎರಡೂ ಶಿಕ್ಷೆ ವಿಧಿಸಬಹುದಾಗಿದೆ.

ನಿರ್ವಹಣಾ ನ್ಯಾಯಮಂಡಳಿಯ ತೀರ್ಪು ತಮಗೆ ವಿರುದ್ಧವಾಗಿದ್ದಲ್ಲಿ/ಇಷ್ಟವಿಲ್ಲದಿದ್ದಲ್ಲಿ ಆ ತೀರ್ಪಿನ ವಿರುದ್ಧ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಮೇಲ್ಮನವಿ ನ್ಯಾಯಮಂಡಳಿಯಲ್ಲಿ ಪ್ರಕರಣ ದಾಖಲಿಸಿ ಗರಿಷ್ಠ 30ದಿನಗಳ ಒಳಗಾಗಿ ನ್ಯಾಯ ಪಡೆಯಬಹುದಾಗಿದೆ. ಮೇಲ್ಮನವಿ ನ್ಯಾಯ ಮಂಡಳಿಯ ಆದೇಶ ಅಂತಿಮವಾಗಿರುತ್ತದೆ.

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007ರ ಪ್ರಕಾರ ಆಯಾ ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ನಿರ್ವಹಣಾಧಿಕಾರಿಗಳೆಂದು ಪದನಾಮಗೊಳಿಸಿ ಸರ್ಕಾರವು ಆದೇಶಿದೆ.

### ವೃದ್ಧಾಶ್ರಮಗಳು

- ರಾಜ್ಯದ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ನಡೆಸಲು ಆಡಳಿತಾತ್ಮಕ ಮಂಜೂರಾತಿ ಇದ್ದು, ಪ್ರಸ್ತುತ ಬೆಂಗಳೂರು ನಗರ ಜಿಲ್ಲೆ 2 ಸೇರಿದಂತೆ ಒಟ್ಟು **26** ವೃಧ್ಧಾಶ್ರಮಗಳು ನಡೆಯುತ್ತಿವೆ.
- ಪ್ರತಿ ಜಿಲ್ಲೆಯ ಕಂದಾಯ ಉಪ ವಿಭಾಗದಲ್ಲಿ ತಲಾ ಒಂದರಂತೆ ಹೊಸದಾಗಿ 52 ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲು 2018–19ರಲ್ಲಿ ಸರ್ಕಾರದ ಆದೇಶವಾಗಿರುತ್ತದೆ.
- ಪ್ರಸ್ತುತ ಮೈಸೂರು, ಹುಣಸೂರು, ಬೀದರ್, ಹಾಸನ, ಸಕಲೇಶಪುರ, ಶಿವಮೊಗ್ಗ ಹಾಗೂ ಸಾಗರ, ತುಮಕೂರು ಕಂದಾಯ ಉಪ ವಿಭಾಗದಲ್ಲಿ ವೃದ್ಧಾಶ್ರಮಗಳನ್ನು ನಡೆಯುತ್ತಿವೆ.
- ಪ್ರತಿ ವೃದ್ಧಾಶ್ರಮದಲ್ಲಿ 25 ಜನ ಫಲಾನುಭವಿಗಳು, ಒಂದು ವೃದ್ಧಾಶ್ರಮಕ್ಕೆ ಒಟ್ಟು ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಮಂಜೂರು ಮಾಡಲಾಗುತ್ತದೆ.
- ಈ ಅನುದಾನದಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳನ್ನು ಭರಿಸಲಾಗುವುದು.

## ಹಿರಿಯ ನಾಗರಿಕರಿಗೆ ಸಹಾಯವಾಣಿ ಕೇಂದ್ರಗಳು: (ಶುಲ್ಕ ರಹಿತ ದೂರವಾಣಿ ಸಂಖ್ಯೆ:1090)

- ಹಿರಿಯ ನಾಗರಿಕರ ತುರ್ತು ಸಹಾಯಕ್ಕಾಗಿ ಹಾಗೂ ಅವರ ಸಮಸ್ಯೆಗಳನ್ನು ಬಗೆಹರಿಸಲು. ಕಾನೂನು ಸಲಹೆಗಳನ್ನು ನೀಡಲು ರಾಜ್ಯದ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ. ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ನಡೆಸಲು ಅವಕಾಶವಿರುತ್ತದೆ.

## ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ

- ರಾಜ್ಯದ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರಿಗಾಗಿ ಹಗಲು ಯೋಗಕ್ಷೇಮ ಕೇಂದ್ರಗಳನ್ನು ನಡೆಸಲು ಸರ್ಕಾರದ ಮಂಜೂರಾತಿ ದೊರೆತ್ತಿದ್ದು, ಪ್ರಸ್ತುತ ಬೆಂಗಳೂರು ನಗರ ಜಿಲ್ಲೆ 2 ಸೇರಿದಂತೆ ಒಟ್ಟು 26 ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳು ನಡೆಯುತ್ತಿವೆ. ಪ್ರತಿ ಕೇಂದ್ರದಲ್ಲಿ ಸುಮಾರು 50–150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ.
-

## ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.